# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 625

2) ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ (ವಿಧಾನಸಭಾ ಕ್ಷೇತ್ರ)

3) ಉತ್ತರಿಸುವ ದಿನಾಂಕ : 11.12.2025

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಉಪ ವಿಭಾಗದ ಉಪ ಪೊಲೀಸ್ ಅಧೀಕ್ಷಕರ ಕಛೇರಿ ಹಾಗೂ ಕೊಪ್ಪಳ ಮಹಿಳಾ ಪೊಲೀಸ್ ಠಾಣೆಗೆ ಪ್ರತ್ಯೇಕ ಕಟ್ಟಡ ಇಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶೀಘ್ರವಾಗಿ ಸ್ವಂತ ಕಛೇರಿ/ಕಟ್ಟಡ ನಿರ್ಮಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ; | ಕೊಪ್ಪಳ ಉಪ ವಿಭಾಗದ ಉಪ ಪೊಲೀಸ್ ಅಧೀಕ್ಷಕರ ಕಛೇರಿ ಸಂಚಾರಿ ಪೊಲೀಸ್ ಠಾಣೆಯ ಮೇಲ್ಭಾಗದಲ್ಲಿ ಹಾಗೂ ಕೊಪ್ಪಳ ಮಹಿಳಾ ಪೊಲೀಸ್ ಠಾಣೆ ಕೊಪ್ಪಳ ನಗರ ಪೊಲೀಸ್ ಠಾಣೆಯ ಮೇಲ್ಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಕಛೇರಿ ಹಾಗೂ ಮಹಿಳಾ ಪೊಲೀಸ್ ಠಾಣೆಗೆ ಪ್ರತ್ಯೇಕ ಕಟ್ಟಡ ಇಲ್ಲದಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.<br><br>ಕೊಪ್ಪಳ ಜಿಲ್ಲೆಯ ಮಹಿಳಾ ಪೊಲೀಸ್ ಠಾಣೆಗೆ ಹೊಸ ಕಟ್ಟಡ ನಿರ್ಮಾಣ ಮಾಡುಲು ಅನುದಾನ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಕೊಪ್ಪಳ ಉಪ ವಿಭಾಗದ ಉಪ ಪೊಲೀಸ್ ಅಧೀಕ್ಷಕರ ಕಛೇರಿ ನಿರ್ಮಾಣದ ಸಂಬಂಧ ಪೊಲೀಸ್ ಅಧೀಕ್ಷಕರು, ಕೊಪ್ಪಳ ಜಿಲ್ಲೆ ರವರಿಂದ ಪ್ರಸ್ತಾವನೆಯನ್ನು ಸ್ವೀಕರಿಸಿದ್ದು, ಮುಂದಿನ ದಿನಗಳಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ ನೂತನ ಕಟ್ಟಡ ನಿರ್ಮಾಣದ ಬಗ್ಗೆ ಪರಿಶೀಲಿಸಲಾಗುವುದು. |
| ಆ) | ಕೊಪ್ಪಳ ಜಿಲ್ಲೆಯಲ್ಲಿ ಸಿವಿಲ್ ಪೊಲೀಸ್ ಹಾಗೂ ಡಿಎಆರ್ ಘಟಕದಲ್ಲಿ ಪೊಲೀಸ್ ಕಾನ್ಸ್ ಟೇಬಲ್ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳುತ್ತದೆ; | ಕೊಪ್ಪಳ ಜಿಲ್ಲೆಗೆ ಮಂಜೂರಾದ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಸಿವಿಲ್ ಪೊಲೀಸ್ ಹಾಗೂ ಡಿಎಆರ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ಸಂಖ್ಯೆ ವಿವರ ಈ ಕೆಳಕಂಡಂತೆ ಒದಗಿಸಲಾಗಿದೆ.<br><br>ಕ್ರ.ಸಂ \| ಹುದ್ದೆ \| ಮಂಜೂರಾತಿ ಬಲ \| ಹಾಲಿ ಬಲ \| ರಿಕ್ತ ಸ್ಥಾನ<br>1. \| ಸಿಪಿಸಿ \| 447 \| 389 \| 58<br>2. \| ಎಪಿಸಿ \| 191 \| 184 \| 7<br><br>ಸರ್ಕಾರವು 2025-26 ನೇ ಸಾಲಿನಲ್ಲಿ ಇಲಾಖೆಯಲ್ಲಿ ರಿಕ್ತವಿರುವ ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡಿದ್ದು, ನೇಮಕಾತಿಗಾಗಿ ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ ಹಾಗೂ ತಾತ್ಕಾಲಿಕವಾಗಿ ಗೃಹ ರಕ್ಷಕ ಸಿಬ್ಬಂದಿಗಳನ್ನು ಜಿಲ್ಲೆಯ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ಕಾರ್ಯಗಳಿಗೆ ನಿಯುಕ್ತಿಗೊಳಿಸಲಾಗಿರುತ್ತದೆ. |

<table>
<tr>
<td>ಇ)</td>
<td>ಜಿಲ್ಲೆಯ ಪೊಲೀಸ್ ಸಿಬ್ಬಂದಿಗಳಿಗೆ ವಾಸಿಸಲು ಸಮರ್ಪಕವಾದ ವಸತಿ ಗೃಹಗಳ ಕೊರತೆಯಿರುವುದರಿಂದ, ಕ್ವಾರ್ಟರ್ಸ್‌ಗಳ ನಿರ್ಮಾಣಕ್ಕೆ ಸರ್ಕಾರ ಬಜೆಟ್ ಒದಗಿಸುವುದೇ; (ವಿವರ ನೀಡುವುದು);</td>
<td>ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 697 ಪೊಲೀಸ್ ವಸತಿ ಗೃಹಗಳು ಲಭ್ಯವಿದ್ದು, ಕೆಲವು ಪೊಲೀಸ್ ಠಾಣೆಯ 92 ಸಿಬ್ಬಂದಿಗಳಿಗೆ ಮಾತ್ರ ವಾಸಿಸಲು ಸಮರ್ಪಕವಾದ ವಸತಿ ಗೃಹಗಳ ಕೊರತೆ ಇರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/93/ಪಿಬಿಎಲ್/2020, ದಿ:15/01/2021ರಲ್ಲಿ ಪೊಲೀಸ್ ಗೃಹ 2025 ಯೋಜನೆಯಡಿ ಮುಂದಿನ 05 ವರ್ಷಗಳಲ್ಲಿ 10,034 ಪೊಲೀಸ್ ವಸತಿಗೃಹಗಳನ್ನು ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಸದರಿ ಯೋಜನೆಯಡಿ ಸರ್ಕಾರ ಅನುದಾನ ಒದಗಿಸುತ್ತಿದ್ದು, ಇದರಲ್ಲಿ ಕೊಪ್ಪಳ ಜಿಲ್ಲೆಗೆ ಪೊಲೀಸ್ ಗೃಹ - 2025 ಯೋಜನೆಯ ಹಂತ – 4 ರಲ್ಲಿ ಹನುಮಸಾಗರದಲ್ಲಿ 12 ಪಿಸಿ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಪರಿಗಣಿಸಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಹಾಗೂ ಹಂತ – 5 ರಲ್ಲಿ ಕುಷ್ಟಗಿಯಲ್ಲಿ 12 ಪಿಸಿ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಪರಿಗಣಿಸಿದ್ದು, ಟೆಂಡರ್ ಆಹ್ವಾನಿಸಲಾಗಿದೆ.</td>
</tr>
<tr>
<td>ಈ)</td>
<td>ದೊಡ್ಡ ಭೌಗೋಳಿಕ ವಿಸ್ತೀರ್ಣ, ಹೆಚ್ಚುತ್ತಿರುವ ಸೈಬರ್ ಅಪರಾಧಗಳು, ಜನಸಂದಣಿ ಪ್ರದೇಶಗಳು ಮತ್ತು ಟ್ರಾಫಿಕ್ ಸಮಸ್ಯೆಗಳನ್ನು ಗಮನಿಸಿ, ಕೊಪ್ಪಳ ಜಿಲ್ಲೆಯಲ್ಲಿ ಕಮಾಂಡ್ ಕಂಟ್ರೋಲ್ ಸೆಂಟರ್, ಟ್ರಾಫಿಕ್ ಸ್ಮಾರ್ಟ್ ಸಿಸ್ಟಮ್ ಹಾಗೂ ಸೈಬರ್ ಠಾಣೆಗೆ ಹೆಚ್ಚುವರಿ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ಒದಗಿಸುವುದು)</td>
<td>ಕೊಪ್ಪಳ ಜಿಲ್ಲೆಯು ದೊಡ್ಡ ಭೌಗೋಳಿಕ ವಿಸ್ತೀರ್ಣ, ಹೊಂದಿದ್ದು, ಹೆಚ್ಚುತ್ತಿರುವ ಸೈಬರ್ ಅಪರಾಧಗಳು, ಜನಸಂದಣಿ ಪ್ರದೇಶಗಳು ಮತ್ತು ಟ್ರಾಫಿಕ್ ಸಮಸ್ಯೆಗಳನ್ನು ಗಮನಿಸಿ, ಕೊಪ್ಪಳ ಜಿಲ್ಲೆಯಲ್ಲಿ ಕಮಾಂಡ್ ಕಂಟ್ರೋಲ್ ಸೆಂಟರ್, ಟ್ರಾಫಿಕ್ ಸ್ಮಾರ್ಟ್ ಸಿಸ್ಟಮ್ ಹಾಗೂ ಸೈಬರ್ ಠಾಣೆಗೆ ಹೆಚ್ಚುವರಿ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದು ಕೊಂಡ ಕ್ರಮಗಳು ಈ ಕೆಳಕಂಡತ್ತಿರುತ್ತದೆ:-<br><br>1. ಕೊಪ್ಪಳ ಜಿಲ್ಲೆಯಲ್ಲಿ 14 ಕಾನೂನು ಸುವ್ಯವಸ್ಥೆ ಹಾಗೂ 02 ಸಂಚಾರ ಪೊಲೀಸ್ ಠಾಣೆ, 01 ಮಹಿಳಾ ಪೊಲೀಸ್ ಠಾಣೆ ಹಾಗೂ 01 ಸೈಬರ್ ಪೊಲೀಸ್ ಠಾಣೆಗಳು ಕಾರ್ಯ ನಿರ್ವಹಿಸುತ್ತಿದ್ದು, ಜಿಲ್ಲೆಯಾದ್ಯಾಂತ ದಾಖಲಾಗುವ ಪ್ರಕರಣಗಳ ತನಿಖೆ ವ್ಯವಸ್ಥಿತವಾಗಿ ನಿರ್ವಹಿಸಲಾಗುತ್ತಿದೆ.<br><br>2. ಕೊಪ್ಪಳ ಜಿಲ್ಲೆಯಲ್ಲಿ ಸೈಬರ್ ಠಾಣೆಯು 2019 ನೇ ವರ್ಷದಿಂದ ಕಾರ್ಯ ನಿರ್ವಹಿಸುತ್ತಿದ್ದು, ಡಿ.ಎಸ್.ಪಿ. ದರ್ಜೆಯ ಅಧಿಕಾರಿ ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಸೈಬರ್ ಪೊಲೀಸ್ ಠಾಣೆಯಲ್ಲಿ ಈ ಕೆಳಕಂಡಂತೆ ಪ್ರಕರಣಗಳು ವರದಿಯಾಗಿದ್ದು ಕಳೆದ ವರ್ಷಕ್ಕೆ ಹೋಲಿಕೆ ಮಾಡಿದಲ್ಲಿ ಪ್ರಸಕ್ತ ವರ್ಷದಲ್ಲಿ ಸೈಬರ್ ಅಪರಾಧ ಪ್ರಕರಣಗಳು ಕಡಿಮೆಯಾಗಿರುತ್ತವೆ. ದಾಖಲಾಗಿರುವ ಸೈಬರ್ ಅಪರಾಧಗಳ ಅಂಕಿ-ಅಂಶಗಳು ಈ ಕೆಳಕಂಡಂತೆ ಇರುತ್ತವೆ.
<table>
<tr><th>Sl No</th><th>Year</th><th>Cyber Crime Reported</th></tr>
<tr><td>1.</td><td>2022</td><td>22</td></tr>
<tr><td>2.</td><td>2023</td><td>20</td></tr>
<tr><td>3.</td><td>2024</td><td>28</td></tr>
<tr><td>4.</td><td>2025 (15.11.2025)</td><td>18</td></tr>
</table>
</td>
</tr>
</table>

| | | |
|---|---|---|
| | | 3. ಕೊಪ್ಪಳ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಸಾರ್ವಜನಿಕ ಸ್ಥಳಗಳಲ್ಲಿ, ಸರ್ಕಾರಿ ತರಬೇತಿ ಸಂಸ್ಥೆಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಸೈಬರ್ ಅಪರಾಧಗಳ ಕುರಿತು ಪ್ರಸಕ್ತ ವರ್ಷದಲ್ಲಿ ಈವರೆಗೆ ಒಟ್ಟು 38 ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗಿದೆ.<br>4. ಸಾಮಾಜಿಕ ಜಾಲ ತಾಣಗಳಲ್ಲಿಯೂ ಸಹ ಸೈಬರ್ ಅಪರಾಧದ ಬಗ್ಗೆ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಂಡಿರುತ್ತದೆ.<br>5. ಕೊಪ್ಪಳ ಜಿಲ್ಲೆಯಲ್ಲಿ ಹೆಲ್ಪ್ ಲೈನ್ ಕರೆಗಳನ್ನು ನಿರ್ವಹಿಸಲು 112 "ಕಮಾಂಡ್ ಕಂಟ್ರೋಲ್ ಸೆಂಟರ್" ಕಾರ್ಯ ನಿರ್ವಹಿಸುತ್ತಿದ್ದು, ಇದರಡಿ 09 ERSS ವಾಹನಗಳಿದ್ದು, ಇದಕ್ಕೆ ಬರುವ ದೂರುಗಳಿಗೆ 10 ರಿಂದ 15 ನಿಮಿಷಗಳಲ್ಲಿ ಸ್ಪಂದಿಸಲಾಗುತ್ತಿದೆ. ಹೈವೇ ಪ್ಯಾಟ್ರೋಲಿಂಗ್‌ನಲ್ಲಿ 05 ವಾಹನಗಳು ಕಾರ್ಯ ನಿರ್ವಹಿಸುತ್ತಿದ್ದು, ಹೆದ್ದಾರಿಯಲ್ಲಿನ ದೂರುಗಳಿಗೆ ಶೀಘ್ರವಾಗಿ ಸ್ಪಂದಿಸಲಾಗುತ್ತಿದೆ.<br>6. ಸಂಚಾರ ದೀಪಗಳನ್ನು(ಸಿಗ್ನಲ್ ಲೈಟ್ಸ್) ಬಳಸಿ ಟ್ರಾಫಿಕ್ ಸಮಸ್ಯೆಗಳನ್ನು ಬಗೆಹರಿಸಲಾಗುತ್ತಿದೆ.<br>7. ಕೊಪ್ಪಳ ಜಿಲ್ಲೆಯಲ್ಲಿ 2 ಸಂಚಾರಿ ಪೊಲೀಸ್ ಠಾಣೆಗಳು ಕರ್ತವ್ಯ ನಿರ್ವಹಿಸುತ್ತಿದ್ದುದು ಇರುತ್ತದೆ. ಜಿಲ್ಲೆಯಲ್ಲಿ ಸಂಚಾರ ನಿಯಮಗಳನ್ನು ಉಲ್ಲಂಘಿಸುವ ವಾಹನ ಸವಾರರ ವಿರುದ್ಧ ಐ.ಎಂ.ವಿ. ಕಾಯ್ದೆ ಅಡಿಯಲ್ಲಿ ಒಟ್ಟು 74,705 ಪ್ರಕರಣಗಳನ್ನು ಹಾಗೂ 345 ಡಿ.ಡಿ.ಪ್ರಕರಣಗಳನ್ನು ದಾಖಲಿಸಲಾಗಿದೆ.<br><br>TRAFFIC VIOLATIONS NO. OF CASES — 2023: 73,755; 2024: 73,511; 2025(31.10.2025): 74,705<br>D.D Cases — 2023: 83; 2024: 356; 2025(31.10.2025): 345<br><br>8. ಸೈಬರ್ ಪೊಲೀಸ್ ಠಾಣೆಗೆ ಈಗಾಗಲೇ ಡಾಟಾ ಎಕ್ಸ್‌ಟ್ರಾಕ್ಷನ್ ಮಾಡುವ ಕುರಿತು XRY Tool ಪೂರೈಸಿದ್ದು ಅದರ ಮೂಲಕ ಕ್ರಮ ಕೈಗೊಳ್ಳಲಾಗುತ್ತಿದೆ. ಸದರಿ XRY Tool ನಲ್ಲಿ ಕಾರ್ಯ ನಿರ್ವಹಿಸಲು ಇಬ್ಬರು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ. ಅದರಂತೆ ವ್ಯವಸ್ಥಿತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br>9. ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಸಂಚಾರಿ ಕಮಾಂಡ್ ಕಂಟ್ರೋಲ್ ಸೆಂಟರ್ ನಿರ್ಮಾಣ ಹಂತದಲ್ಲಿದ್ದು, ಕೊಪ್ಪಳದಲ್ಲಿ ಮುಂದಿನ ದಿನಗಳಲ್ಲಿ ಸಂಚಾರಿ ಕಮಾಂಡ್ ಕಂಟ್ರೋಲ್ ಸೆಂಟರ್ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. |

| TRAFFIC VIOLATIONS NO. OF CASES | 2023 | 2024 | 2025(31.10.2025) |
|---|---|---|---|
| | 73,755 | 73,511 | 74,705 |
| D.D Cases | 83 | 356 | 345 |

| | | |
|---|---|---|
| | | ಕೊಪ್ಪಳ ಜಿಲ್ಲೆಯಲ್ಲಿ ಜನಸಂದಣಿಯ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿಗಳನ್ನು ನೇಮಕ ಮಾಡಿ ಮತ್ತು ಟ್ರಾಫಿಕ್ ಸಿಗ್ನಲ್ ಗಳಿಂದಲೂ ಸಹ ಟ್ರಾಫಿಕ್ ಸಮಸ್ಯೆಗಳನ್ನು ಬಗೆಹರಿಸಲಾಗುತ್ತಿದೆ. ಸಂಚಾರ ನಿಯಮಗಳನ್ನು ಉಲ್ಲಂಘಿಸಿದ ವಾಹನ ಸವಾರರ ವಿರುದ್ಧ ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

**ಸಂಖ್ಯೆ:ಹೆಚ್‌ಡಿ 108 ಪಿಬಿಎಲ್ 2025**

**(ಡಾ|| ಜಿ. ಪರಮೇಶ್ವರ)**
ಗೃಹ ಸಚಿವರು